**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 100/2023**

| | | | |
|---|---|---|---|
| **ಹೆಸರು** | **:** | **ಶಿವಕುಮಾರ** | **ಚಾ.ಸಾ.1** |
| **ತಂದೆಯ ಹೆಸರು** | **:** | **ಈರಣ್ಣ** | **ಪ್ರಾ.ಸಾ.1** |
| **ವಯಸ್ಸು** | **:** | **28 ವರ್ಷ** | **ದಿನಾಂಕಃ 02-02-2024** |
| **ಉದ್ಯೋಗ** | **:** | **ಕೂಲಿ ಕೆಲಸ** | |
| **ವಾಸಸ್ಥಳ** | **:** | **ಸುಲೇಪೇಟ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಚಾಸಾ-4 ಮತ್ತು 5 ರವರು ನನಗೆ ಗೊತ್ತು. ಆರೋಪಿ ನನಗೆ ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರಿಗೆ ಯಾವುದೇ ದೂರು ನೀಡಿಲ್ಲ. ಈಗ ನೋಡುತ್ತಿರುವ ದೂರಿನಲ್ಲಿರುವ ಸಹಿ ನನ್ನದೆ. ಸದರಿ ದೂರನ್ನು ನಿಪಿ-1 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಆರೋಪಿ ಎಲ್ಲಿದ್ದಾನೆ ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ದೂರಿಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-</u>**

ದಿನಾಂಕ 22-05-2019 ರಂದು ಸಾಯಂಕಾಲ 7 ಗಂಟೆಗೆ ನಾನು ಮೊಟರ ಸೈಕಲ ಮೇಲೆ ಹೋಗುವಾಗ ಬಡಕಲ್ ಮಸೀದಿ ಹತ್ತಿರ ಆರೋಪಿತರೆಲ್ಲರು ಕೂಡಿ ನನಗೆ ತಡೆದು ನಿಲ್ಲಿಸಿ ರಂಡಿ ಮಗನೇ ಬೋಸಡಿ ಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದರು ಎಂದರೆ ಸರಿಯಲ್ಲ. ನಾನು ವಾಹನದಿಂದ ಕೇಳಗೆ ಇಳಿಯುತ್ತಿದ್ದಂತೆ ಮೈನುದ್ದಿನ್ ಮತ್ತು ರಫೀಕ್ ನನಗೆ ಒತ್ತಿ ಹಿಡಿದುಇಸ್ಮಾಯಿಲ್ ಈತನು ತನ್ನ ಕೈಯಲ್ಲಿದ್ದ ಬ್ಲೆಡನಿಂದ ನನ್ನ ಎಡಗೈ ಮೊಳಕೈಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ. ಶಬ್ದ ಕೇಳಿ ಚಾಸಾ-4 ಮತ್ತು 5 ರವರು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಹಿಂದಿನ ಜಗಳ ವೈಮನಸ್ಸಿನಿಂದ ಆರೋಪಿತರು ಕೃತ್ಯ ಮಾಡಿದ್ದಾರೆ ಎಂದರೆ ಸರಿಯಲ್ಲ.

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**